ಸುದ್ದಿ ಸಿಂಚನ

ಹಣ ದುರ್ಬಳಕೆ: ಗ್ರಾಪಂ ಸದಸ್ಯೆಯ ಸದಸ್ಯತ್ವ ರದ್ದು

ಬೀದರ್: ತಾಲೂಕಿನ ಅಷ್ಟೂರ್‌ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಮ್ಮಾ ಗ್ರಾಮದಲ್ಲಿ ಕುಡಿಯುವ ನೀರಿನ ನಿರ್ವಹಣೆ ವಿಚಾರವಾಗಿ ಹಣ ಪಡೆದು ಕರ್ತವ್ಯ ಲೋಪವೆಸಗಿದ ಆರೋಪದ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯೆ ವಿಜಯಲಕ್ಷ್ಮಿ ಬೀರಪ್ಪ ಅವರನ್ನು ಸದಸ್ಯತ್ವ ಸ್ಥಾನದಿಂದ ವಜಾಗೊಳಿಸಲಾಗಿದೆ. ಗ್ರಾಮದಲ್ಲಿ ಕುಡಿಯುವ ನೀರಿನ ವಾಲ್ ದುರಸ್ತಿ ಮಾಡಿಸುವುದಾಗಿ ಹೇಳಿ ವಿಜಯಲಕ್ಷ್ಮಿ ಅವರು 11 ಸಾವಿರ ರು. ಚೆಕ್ ಮೂಲಕ ಪಡೆದುಕೊಂಡಿದ್ದರು. ಆದರೆ, ಸಂಬಂಧಿತ ಕಾಮಗಾರಿಯನ್ನು ಪೂರ್ಣಗೊಳಿಸದೇ ನಿಯಮ ಉಲ್ಲಂಘಿಸಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ. ಇದರಿಂದಾಗಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ-1993ರ ಪ್ರಕಾರಣ 43(ಎ) ಅಡಿಯಲ್ಲಿ ಈ ಕ್ರಮ ಜರುಗಿಸಲಾಗಿದ್ದು, ಸದಸ್ಯತ್ವದಿಂದ ವಜಾಗೊಳಿಸುವುದರ ಜೊತೆಗೆ ಮುಂದಿನ 6 ವರ್ಷಗಳವರೆಗೆ ಯಾವುದೇ ಪಂಚಾಯಿತಿ ಚುನಾವಣೆಗೆ ಸ್ಪರ್ಧಿಸಲು ಅನರ್ಹಗೊಳಿಸಿ ಆದೇಶಿಸಲಾಗಿದೆ.

ಗ್ಯಾಸ್ ಪೈಪ್ ಲೀಕೇಜ್: ತಪ್ಪಿದ ಭಾರೀ ಅನಾಹುತ



ಬೀದರ್: ಮನೆಗಳಿಗೆ ಸರಬರಾಜು ಮಾಡಲು ನೆಲದಲ್ಲಿ ಹಾಕಲಾಗಿದ್ದ ಗ್ಯಾಸ್ ಪೈಪ್ ಲೀಕೇಜ್ ಆದ ಪರಿಣಾಮ ಬೆಂಕಿ ಹತ್ತಿ ಧಗಧಗನೆ ಉರಿದ ಘಟನೆ ನಗರದ ಜೈಲ್ ಕಾಲೋನಿಯಲ್ಲಿ ಮಂಗಳವಾರ ಬೆಳಗ್ಗೆ ಜರುಗಿದೆ. ಪೈಪ್ ಲೀಕೇಜ್ ಆದ ಸ್ಥಳದಲ್ಲಿಯೇ ಬೆಂಕಿ ಹತ್ತಿ ಉರಿಯುತ್ತಿರುವುದರಿಂದ ಕೆಲಹೊತ್ತು ಸುತ್ತಲಿನ ಮನೆಯವರು ಗಾಬರಿಗೊಂಡಿದ್ದರು. ಸಂಬಂಧಪಟ್ಟ ಕಂಪನಿಯವರಿಗೆ ಕರೆ ಮಾಡಿದ್ದರು ಸಮಯಕ್ಕೆ ಕರೆ ಸ್ವೀಕರಿಸಿಲ್ಲ, ನಂತರ ಅಗ್ನಿ ಶಾಮಕ ದಳಕ್ಕೆ ಕರೆ ಮಾಡಿದಾಗ ಕೂಡಲೆ ಸ್ಥಳಕ್ಕಾಗಿಮಿಸಿದ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು. ಇದರಿಂದ ದೊಡ್ಡ ದುರಂತ ತಪ್ಪಿದಂತಾಗಿದೆ.

10ರಂದು ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ

ಬೀದರ್: ಜಿಲ್ಲಾಡಳಿತ, ಜಿ.ಪಂ, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ್ ಇವರ ಸಂಯುಕ್ತಾಶ್ರಯದಲ್ಲಿ ಮೇ 10ರಂದು ಮಧ್ಯಾಹ್ನ 12 ಗಂಟೆಗೆ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಮುದಾಯ ಭವನ ಅಮಲಾಪೂರ ರಸ್ತೆ, ಬೀದರ್‌ನಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಉದ್ಘಾಟಿಸುವರು. ಪೌರಾಡಳಿತ ಸಚಿವರಾದ ರಹೀಮ ಖಾನ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಯಾಗಿ ಸಂಸದ ಸಾಗರ ಖಂಡ್ರೆ, ಜಿಲ್ಲೆಯ ಎಲ್ಲಾ ಶಾಸಕರು, ನಿಗಮ ಮಂಡಳಿ ಅಧ್ಯಕ್ಷರು, ಬುಡಾ ಅಧ್ಯಕ್ಷರು ಅಲ್ಲದೇ ಅತಿಥಿ ಉಪನ್ಯಾಸಕರಾಗಿ ಅಕ್ಕಮಹಾದೇವಿ ಮಹಾವಿದ್ಯಾಲಯದ ರಸಾಯನಶಾಸ್ತ್ರ ವಿಭಾಗದ ಹಿರಿಯ ಉಪನ್ಯಾಸಕ ಶಿವಶರಣಪ್ಪಾ ಹುಗ್ಗಿ ಪಾಟೀಲ ಭಾಗವಹಿಸುವರು.

ಶುಲ್ಕ ಮರುಪಾವತಿ: ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಬೀದರ್: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕ ಮೇ 16ರವರೆಗೆ ವಿಸ್ತರಿಸಲಾಗಿದೆ ಎಂದು ಬೀದರ್ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹರು ಆನ್‌ಲೈನ್ ಃhttps://ssp.postmatric.karnataka.gov.in/ ಮೂಲಕ ಮೇ 16ರ ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳಿಗಾಗಿ https://bcwd.karnataka.gov.in/ ಭೇಟಿ ನೀಡುವುದು, ಇಲಾಖಾ ಸಹಾಯವಾಣಿ 8050770005 ಅಥವಾ ಇಮೇಲ್ bcwdhelpline@gmail.comವಿಳಾಸಕ್ಕೆ, ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ 1902 ಅಥವಾ ಇಮೇಲ್ bcwdhelpline@gmail.com ನೀಡಬಹುದಾಗಿದೆ.

ಸಂಚಾರ ನಿಯಮಗಳನ್ನು ತಪ್ಪದೇ ಪಾಲಿಸಿ

ಸಿಪಿಐ ರಮೇಶಕುಮಾರ್ ಆಟೋ ಚಾಲಕರಿಗೆ ಕಿವಿಮಾತು | ಆಟೋ ಚಾಲಕರಿಗೆ ಸಂಚಾರ ನಿಯಮಗಳ ಅರಿವು ಕಾರ್ಯಕ್ರಮ | ಪ್ರಯಾಣಿಕರ ಸುರಕ್ಷತೆಗೆ ಗಮನ ಕೊಡಲು ಸೂಚನೆ

• **ಕನ್ನಡಪ್ರಭ ವಾರ್ತೆ** ಬೀದರ್

ನಗರದಸಂಚಾರಪೊಲೀಸ್‌ಠಾಣೆಯಿಂದ ಬೀದರ್‌ಹಳೆ ಬಸ್ ನಿಲ್ದಾಣದಲ್ಲಿ ಆಟೋ ಚಾಲಕರು ಮತ್ತು ಬಸ್ ಚಾಲಕರಿಗೆ ಕಡ್ಡಾಯವಾಗಿ ಸಮವಸ್ತ್ರ ಧರಿಸುವ ಹಾಗೂ ಸಂಚಾರದ ನಿಯಮಗಳ ಪಾಲನೆ ಬಗ್ಗೆ ಅರಿವು ಕಾರ್ಯಕ್ರಮ ಬುಧವಾರ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಬೀದರ್‌ಸಂಚಾರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್‌ರಮೇಶ್‌ಕುಮಾರ್‌ಮೈಲೂರಕರ್ ಮಾತನಾಡಿ, ಆಟೋಚಾಲಕರುರಸ್ತೆಬದಿಯಲ್ಲಿ ಅಡ್ಡವಾಗಿ ವಾಹನವನ್ನು ಪಾರ್ಕ್ ಮಾಡಿದರೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ಬೀದರ್‌ನಗರದ ಸಂಚಾರ ಪೊಲೀಸ್ ಠಾಣೆಯಿಂದ ಬೀದರ್‌ಹಳೆ ಬಸ್ ನಿಲ್ದಾಣದಲ್ಲಿ ಆಟೋ ಚಾಲಕರು ಮತ್ತು ಬಸ್ ಚಾಲಕರಿಗೆ ಸಂಚಾರದ ನಿಯಮಗಳ ಪಾಲನೆ ಬಗ್ಗೆ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಆಟೋ ಚಾಲಕರು ಪ್ರಯಾಣಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಆಟೋ ಚಾಲಕರು ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಗಮನ ಕೊಡಬೇಕು. ಆಟೋವನ್ನು ಅಡ್ಡಾದಿಡ್ಡಿಯಾಗಿ ಓಡಿಸಬಾರದು ಎಂದು ಕಿವಿಮಾತು ಹೇಳಿದರು.

ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಅನ್ನು ಧರಿಸಬೇಕು, ಕುಡಿದು ವಾಹನ ಚಲಾಯಿಸಬಾರದು, ವಾಹನ ಚಲಾಯಿಸುವಾಗ ಮೊಬೈಲ್ ಬಳಕೆ ಮಾಡಬಾರದು, ಸಂಚಾರಿ ನಿಯಮ ಪಾಲಿಸಬೇಕು ಎಂದರು.

■ ಪ್ರಯಾಣಿಕರೊಂದಿಗೆ ಸೌಜನ್ಯದಿಂದ ವರ್ತಿಸುವಂತೆ ಚಾಲಕರಿಗೆ ಸೂಚನೆ

ಇದಲ್ಲದೇ ದ್ವಿಚಕ್ರ ವಾಹನದ ಚಾಲಕರು (ಡಿಫೆಕ್ಟಿವ್ ಸೈಲೆನ್ಸರ್) ಕರ್ಕಶ ಶಬ್ದ ಬಳಸಬಾರದು ಎಂದು ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸಲಾಯಿತು. ಬಸ್ ಚಾಲಕರು, ಆಟೋ ಚಾಲಕರು, ಸಂಚಾರಿ ಪೊಲೀಸ್ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಇದ್ದರು.

ನೀರಿನ ಸಮಸ್ಯೆಗಳಿಗೆ ಶೀಘ್ರವೇ ಪರಿಹಾರ: ಪಾಟೀಲ್ ಭರವಸೆ



ಜಂಬಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ತಾಂಡಾಗಳಿಗೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ್ ಅವರು ಭೇಟಿ ನೀಡಿ ನೀರಿನ ಸಮಸ್ಯೆ ಪರಿಶೀಲಿಸಿದರು.

ಔರಾದ್: ತಾಲೂಕಿನ ಜಂಬಗಿ ಗ್ರಾಮ ಪಂಚಾಯಿತಿವ್ಯಾಪ್ತಿಯಮಹಾರಾಜವಾಡಿ, ವಿಜಯನಗರ ತಾಂಡಾ ಹಾಗೂ ಪೋಮಾ ದೇವಲಾ ತಾಂಡಾಗಳಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ತಾಲೂಕುಪಂಚಾಯಿತಿಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ್ ಅವರು ಭೇಟಿ ನೀಡಿ ಪರಿಶೀಲಿಸಿದರು. ಗ್ರಾಮಗಳಲ್ಲಿ ನೀರಿನ ಮೂಲಗಳು ಬತ್ತಿ ಹೋಗಿರುವ ಹಿನ್ನೆಲೆಯಲ್ಲಿ ಸ್ಥಳೀಯರು ತೀವ್ರ ನೀರಿನ ಸಂಕಷ್ಟ ಅನುಭವಿಸುತ್ತಿರುವುದನ್ನು ಗಮನಿಸಿದ ಅವರು, ಪರ್ಯಾಯ ವ್ಯವಸ್ಥೆಗಳನ್ನು ಕಲ್ಪಿಸಿ ಶೀಘ್ರದಲ್ಲೇ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಂಬಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ದಿನೇಶ್ ರೆಡ್ಡಿ, ತಾಲೂಕು ಪಂಚಾಯಿತಿ ಐಇಸಿ ಸಂಯೋಜಕ ಅಂಬಾದಾಸ ಪಾಟೀಲ್ ಸೇರಿದಂತೆ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

> **ಮಹಾರಾಜವಾಡಿ ಗ್ರಾಮದಲ್ಲಿ ರೀ ಬೋರ್‌ಮಾಡಿ ನೀರಿನ ಸಮಸ್ಯೆ ಪರಿಹರಿಸಲಾಗುವುದು. ತಾಂಡಾಗಳಲ್ಲಿ ಹೆಚ್ಚಿನ ನೀರಿನ ಸಮಸ್ಯೆ ಇದ್ದು ಪರ್ಯಾಯವಾಗಿ ಖಾಸಗಿ ಟ್ಯಾಂಕರ್‌ಮೂಲಕ ನೀರಿನ ವ್ಯವಸ್ಥೆ ಮಾಡಲಾಗಿದ್ದು, ಅದನ್ನು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ್ದೇನೆ.**
> • **ಕಿರಣ ಪಾಟೀಲ್ ತಾಪಂ** ಕಾರ್ಯನಿರ್ವಾಹಕ ಅಧಿಕಾರಿ, ಔರಾದ್

ಬಿ.ಎಸ್.ವೈ ಜನಸೇವೆಯಲ್ಲಿ ಶತಾಯುಷಿಗಳಾಗಲಿ

ಮಾಜಿ ಶಾಸಕ ಪ್ರಕಾಶ ಖಂಡ್ರೆ ಹಾರೈಕೆ | ಭಾಲ್ಕಿಯಿಂದ ಅಭಿಮಾನೋತ್ಸವಕ್ಕೆ 1000 ಜನ

• **ಕನ್ನಡಪ್ರಭ ವಾರ್ತೆ** ಭಾಲ್ಕಿ

ಕರ್ನಾಟಕದ ರೈತರ ಕಣ್ಮಣಿ, ದೇಶದಲ್ಲಿಯೇ ಕೃಷಿ ಬಜೆಟ್ ಮಂಡಿಸಿದ ಪ್ರಥಮ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪನವರು ಜನ ಸೇವೆಯಲ್ಲಿ ಶತಾಯುಷಿಗಳಾಗಿ ಬಾಳುವಂತಾಗಲಿ ಎಂದು ಮಾಜಿ ಶಾಸಕ ಪ್ರಕಾಶ ಖಂಡ್ರೆ ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಬುಧವಾರ ಪತ್ರಿಕಾಗೋಷ್ಠಿ ಹಾಗೂ ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿ, ಇದೇ ಮೆ. 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್.ವೈ ಅಭಿಮಾನೋತ್ಸವದಲ್ಲಿ ಭಾಲ್ಕಿಯಿಂದ ಸುಮಾರು 1000 ಅಭಿಮಾನಿಗಳು ಹೊರಡುವ ನಿರೀಕ್ಷೆ ಇದೆ ಎಂದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಚಿತ್ರದುರ್ಗದ ಸಂಸದ ಗೋವಿಂದ ಕಾರಜೋಳ ಅಧ್ಯಕ್ಷತೆ ವಹಿಸಲಿದ್ದಾರೆ, ಜಾತ್ಯತೀತ ಮತ್ತು ಪಕ್ಷಾತೀತವಾಗಿ ನಡೆಯುವ ಕಾರ್ಯಕ್ರಮದಲ್ಲಿ ಭಾಲ್ಕಿ ತಾಲೂಕು ವತಿಯಿಂದ ಸಾವಿರಾರು ಜನ ಭಾಗವಹಿಸುವ ನಿರೀಕ್ಷೆ ಇದೆ ಎಂದರು.



ಭಾಲ್ಕಿ ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಬಿ.ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವದ ಕರಪತ್ರವನ್ನು ಮಾಜಿ ಶಾಸಕ ಪ್ರಕಾಶ ಖಂಡ್ರೆ ಬಿಡುಗಡೆ ಮಾಡಿದರು. ವೀರಣ್ಣ ಕಾರಬಾರಿ, ಶಿವರಾಜ ಗಂದಗೆ ಮತ್ತಿತರರು ಇದ್ದರು.

ಬಿಜೆಪಿ ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ ಮಾತನಾಡಿ, ದಕ್ಷಿಣ ಭಾರತದಲ್ಲಿ ಮೊಟ್ಟ ಮೊದಲು ಬಿಜೆಪಿ ಸರ್ಕಾರ ರಚಿಸಿದ ಶ್ರೇಯ ಬಿ.ಎಸ್.ವೈ ಅವರಿಗೆಸಲ್ಲುತ್ತದೆ.ಮುಖ್ಯಮಂತ್ರಿಯಾಗಿ ರೈತರಿಗೆ ಬಡ್ಡಿರಹಿತ ಸಾಲ ನೀಡಿ, ಕೃಷಿ ಬಜೆಟ್ ಮಂಡನೆ ಮಾಡಿದ ರಾಜ್ಯದ ಮೊದಲ ಮುಖ್ಯಮಂತ್ರಿ ಬಿಎಸ್‌ವೈ ಶಿಕ್ಷಣದಲ್ಲಿ ಮಕ್ಕಳಿಗೆ ಆಸಕ್ತಿ ಮೂಡಿಸುವ ನಿಟ್ಟಿನಲ್ಲಿ ಉಚಿತ ಬೈಸಿಕಲ್ ಸೌಲಭ್ಯ, ಹೆಣ್ಣು ಮಕ್ಕಳಿಗೆ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ ಸೇರಿದಂತೆ ಹಲವಾರು ಜನಪ್ರಿಯಯೋಜನೆತಂದಕರ್ನಾಟಕದ ಮುಖ್ಯಮಂತ್ರಿ ಆಗಿದ್ದಾರೆ ಎಂದರು.

ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ್ ಗಂದಗೆ ಮಾತನಾಡಿ, ಭಾಲ್ಕಿಯಲ್ಲಿ ಜನತೆ ಪರಿವರ್ತನೆ ಬಯಸುತ್ತಿದ್ದಾರೆ ಮುಂಬರುವ ದಿನಗಳಲ್ಲಿ ಭಾಲ್ಕಿಯಲ್ಲಿ ಮತ್ತೆ ಬಿಜೆಪಿ ಎಂ.ಎಲ್. ಎ ಆಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ಮುಖಂಡ ರೇವಣಸಿದ್ದ ಜಾಡರ, ಗೋವಿಂದರಾವ್ ಬಿರಾದಾರ, ವಿಜಯಕುಮಾರ್‌ಪಾಟೀಲ್ ಗಾದಗಿ, ಸುಭಾಷ ಬಿರಾದಾರ ಬೀರಿ(ಬಿ), ಸಂತೋಷ್ ಪಾಟೀಲ್, ಮನ್ಮಥ ಸ್ವಾಮಿ ಉಪಸ್ಥಿತರಿದ್ದರು.

ಡಿಪ್ಲೋಮಾ ಕೃಷಿ ವಿದ್ಯಾಲಯ ಮೇಲ್ದರ್ಜೆಗೇರಿಸಿ: ಅರಳಿ

• **ಕನ್ನಡಪ್ರಭ ವಾರ್ತೆ** ಬೀದರ್

ಬೀದರ್‌ನಲ್ಲಿ ನಡೆಯುತ್ತಿರುವ ಡಿಪ್ಲೋಮಾ ಕೃಷಿ ವಿದ್ಯಾಲಯ ಮೇಲ್ದರ್ಜೆಗೇರಿಸಿ ಪ್ರಸ್ತುತ ಇರುವ ಕಾಲೇಜಿಗೆ ಬಿಎಸ್ಸಿ ಕೃಷಿ ಮಹಾವಿದ್ಯಾಲಯ ಮಾಡಬೇಕೆಂದು ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದ ಅರಳಿ ಮನವಿ ಮಾಡಿದ್ದಾರೆ.



ಈ ಕುರಿತು ಮುಖ್ಯಮಂತ್ರಿಗೆ ಬರೆದ ಮನವಿಯಲ್ಲಿ ಬೀದರ್ ಜಿಲ್ಲೆ ಕೃಷಿ ಅವಲಂಬಿತ ಜಿಲ್ಲೆಯಾಗಿದ್ದು, ಶೇಕಡಾವಾರು ಜನತೆ ಕೃಷಿಯನ್ನೆ ನಂಬಿದ್ದಾರೆ. ಈಗಾಗಲೇ ಇಲ್ಲಿ ಸರ್ಕಾರಿ ತೋಟಗಾರಿಕೆ ಮಹಾವಿದ್ಯಾಲ ಯವಿರುತ್ತದೆ. ಮತ್ತು ತಮ್ಮ ಅಭಿವೃದ್ಧಿ ಚಿಂತನೆಯ ಫಲವಾಗಿ ಕಳೆದ 2014-15ನೇ ಸಾಲಿನಲ್ಲಿ ಮಂಜೂರಾತಿ ದೊರೆತು ಅದು ಈಗ ಬಡ ಮಕ್ಕಳ ಆಶಾಕಿರಣವಾಗಿ ಇಂಜಿನಿಯರಿಂಗ್ ಮಹಾವಿದ್ಯಾಲಯ ಕಾರ್ಯನಿರ್ವಹಿಸುತ್ತಿದೆ. ಅಲ್ಲದೆ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸಹ ಬೀದರ್‌ನಲ್ಲಿದೆ. ಆದರೆ ಇಲ್ಲಿ ಕೃಷಿಕರಿಗೆ ಅನುಕೂಲವಾಗುವಂತಹ ಮತ್ತು ಬಡ ರೈತರ ಮಕ್ಕಳ ಜ್ಞಾನಾರ್ಜನೆಗೆ ಪೂರಕವಾಗುವಂತಹ ಕೃಷಿ ಮಹಾವಿದ್ಯಾಲಯ ಇಲ್ಲದಿರುವುದರಿಂದ ಈ ಭಾಗದ ಮಕ್ಕಳು ಕೃಷಿ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ.

ಈ ಹಿಂದೆ ಜಿಲ್ಲಾ ಕಾಂಗ್ರೆಸ್‌ನ ಅಧ್ಯಕ್ಷರು, ಮಾಜಿ ಶಾಸಕರಾದ ಖಾಜಿ ಅರ್ಷದ ಅಲಿ ಅವರು 2015ರಲ್ಲಿ ಕೃಷಿ ಮಹಾವಿದ್ಯಾಲಯ ಪ್ರಾರಂಭಿಸುವಂತೆ ಕೋರಿ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ರಾಯಚೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳಿಗೆ ಪತ್ರ ಬರೆದು ಜಿಲ್ಲೆಗೊಂದು ಕೃಷಿ ಮಹಾವಿದ್ಯಾಲಯ ಮಾಡುವಂತೆ ಸರ್ಕಾರದ ಕಾರ್ಯದರ್ಶಿಯವರಿಗೆ ಪತ್ರ ಬರೆಯಲಾಗಿತ್ತು. ಅದಕ್ಕೆ ಸ್ಪಂದಿಸಿ ಕಾರ್ಯದರ್ಶಿಯವರು ಪತ್ರ ಬರೆದು ವರದಿ ನೀಡುವಂತೆ ಕೃಷಿ ವಿಶ್ವವಿದ್ಯಾಲಯ ರಾಯಚೂರು ಇವರಿಗೆ ಸೂಚಿಸಿರುತ್ತಾರೆ.

ಈಗಾಗಲೇ ಬೀದರ್‌ನಲ್ಲಿ ಕೃಷಿ ಮಹಾವಿದ್ಯಾಲಯಕ್ಕೆ ಪೂರಕವಾಗುವಂತಹ ಕೃಷಿ ಸಂಶೋಧನಾ ಕೇಂದ್ರ ಹಳ್ಳದಕೇರಿ ಬೀದರ್ ಮತ್ತು ಜನವಾಡ ಗ್ರಾಮದಲ್ಲಿ ಫಾರ್ಮ್ ಇದೆ. ಐಸಿಆರ್ ಕೃಷಿ ವಿಜ್ಞಾನ ಕೇಂದ್ರ ಕೂಡ ಬೀದರ್‌ನಲ್ಲಿದೆ. ಲಭ್ಯವಿರುವ ಭೂಮಿ 68.3 ಎಕರೆ ಜಮೀನು ಇರುತ್ತದೆ. ಸುಸಜ್ಜಿತ ಕಾಲೇಜಿನ ಮತ್ತು ಕಚೇರಿ ಕಟ್ಟಡಗಳು ಇರುತ್ತವೆ. ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಸತಿ ನಿಲಯಗಳು ಇವೆ. ಪರೀಕ್ಷಾ ಕೊಠಡಿಗಳು, ಸಂಗ್ರಹಣ ಗೋದಾಮು, ಪ್ರಯೋಗಾಲಯ, ಕೃಷಿ ಪದ್ಧತಿ ಘಟಕ, ಹೈನುಗಾರಿಕೆ ಘಟಕ, ವಿವಿಧ ಕೃಷಿ ತಾಂತ್ರಿಕತೆಗಳ ಪ್ರಾತ್ಯಕ್ಷಿಕ ಘಟಕಗಳು ಇಲ್ಲಿ ಲಭ್ಯವಿರುತ್ತವೆ. ಆದ್ದರಿಂದ ಪ್ರಸ್ತುತ ನಡೆಯುತ್ತಿರುವ ಕೃಷಿ ಡಿಪ್ಲೋಮಾ ಕೋರ್ಸನ್ನು ಮೇಲ್ದರ್ಜೆಗೆ ಏರಿಸಿ ಕೃಷಿ ಮಹಾವಿದ್ಯಾಲಯವನ್ನಾಗಿ ಮಾಡಬೇಕೆಂದು ಜಿಲ್ಲೆಯ ಜನತೆಯ ಪರವಾಗಿ ಮನವಿ ಮಾಡಿದ್ದಾರೆ.

ಮಕ್ಕಳ ಪ್ರತಿಭೆ ಗುರುತಿಸಲು ಬೇಸಿಗೆ ಶಿಬಿರ: ಅನಿಲಕುಮಾರ್ ಜಮಾದರ್

15 ದಿನಗಳು ಚಿತ್ರಕಲೆ, ಕರಕುಶಲ ಕಲೆ, ಕರಾಟೆ, ಯೋಗ, ನಾಟಕ ತರಬೇತಿ



ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಮಂಗಳವಾರ ಹೌಸಿಂಗ್ ಬೋರ್ಡ್ ಕಾಲೋನಿಯ ಜಿಲ್ಲಾ ಬಾಲ ಭವನದಲ್ಲಿ ನಡೆಯಿತು.

• **ಕನ್ನಡಪ್ರಭ ವಾರ್ತೆ** ಬೀದರ್

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಹಾಗೂ ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ 2026-27ನೇ ಸಾಲಿನ ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಮಂಗಳವಾರ ಹೌಸಿಂಗ್ ಬೋರ್ಡ್ ಕಾಲೋನಿಯ ಜಿಲ್ಲಾ ಬಾಲ ಭವನದಲ್ಲಿ ನಡೆಯಿತು.

ರಾಜ್ಯ ಬಾಲ ಭವನ ಸೊಸೈಟಿ ಉಪಾಧ್ಯಕ್ಷ ಅನಿಲಕುಮಾರ ಜಮಾದರ್‌ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಎಂ.ಎಸ್.ಶ್ರೀಧರ ಮಕ್ಕಳೊಂದಿಗೆ ಸಮಾರೋಪಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅನಿಲಕುಮಾರ ಜಮಾದರ್ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪ್ರತಿವರ್ಷ ಬೇಸಿಗೆ ಶಿಬಿರಗಳನ್ನು ಆಯೋಜಿಸಲಾಗುತ್ತಿದ್ದು, ಗ್ರಾಮೀಣ ಭಾಗದ ಮಕ್ಕಳಿಗೆ ವಿಶೇಷವಾಗಿ ಉಪಯುಕ್ತವಾಗುತ್ತಿದೆ, ಮಕ್ಕಳಲ್ಲಿನ ಪ್ರತಿಭೆ ಗುರುತಿಸಿ ಬೆಳೆಸುವ ಉದ್ದೇಶದಿಂದ ಈ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎಸ್.ಎ. ಮುನಾಫ್ ಮಾತನಾಡಿ, ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಇಂತಹ ಶಿಬಿರಗಳು ಮಹತ್ವದ್ದಾಗಿದ್ದು, ಪಠ್ಯೇತರ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಆತ್ಮ ವಿಶ್ವಾಸ ಬೆಳೆಸಲಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಎಂ.ಎಸ್.ಶ್ರೀಧರ್ ಮಾತನಾಡಿ, 15 ದಿನಗಳ ಕಾಲ ನಡೆದ ಶಿಬಿರದಲ್ಲಿ ಚಿತ್ರಕಲೆ, ಕರಕುಶಲ, ಜೇಡಿಮಣ್ಣಿನ ಕಲೆ, ಕರಾಟೆ, ಯೋಗ-ಧ್ಯಾನ, ಸಮೂಹ ನೃತ್ಯ ಹಾಗೂ ನಾಟಕ ತರಬೇತಿಗಳನ್ನು ಬೆಳಿಗ್ಗೆ 8ರಿಂದ ಮಧ್ಯಾಹ್ನ 2ರವರೆಗೆ ನೀಡಲಾಗಿದೆ ಎಂದು ತಿಳಿಸಿದರು.

ಶಿಬಿರದಲ್ಲಿ ಸುಮಾರು 120 ಮಕ್ಕಳು ಪಾಲ್ಗೊಂಡಿದ್ದು, ಪೋಷಕರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಮಹೇಶ್ ಧೂಪೆ, ಸುಧೇಶ್ ಕುಮಾರ್‌ಮೋರೆ, ನೇಹಾ ಕಾಂಬಳೆ, ದೇವಿಂದರ್‌ಮಾಳಗೆ ಮತ್ತು ರಾಜಕುಮಾರ್‌ಅರುಣಾ ಸಾಗರ ತರಬೇತಿ ನೀಡಿದರು. ಸಂಯೋಜಕರಾದ ಸೂರ್ಯಕಾಂತ ಮೊರೆ ನಿರೂಪಿಸಿದರೆ ಸುವಿತ್ ಎಸ್. ಮೊರೆ ವಂದಿಸಿದರು.

ಬೀದರ್-ಬೆಂಗ್ಳೂರು ವಿಮಾನ ಸೇವೆಗೆ ಅನುಮೋದನೆ

ಬೀದರ್: ಏ. 30ರಂದು ನಡೆದ ರಾಜ್ಯ ಸಚಿವ ಸಂಪುಟದಲ್ಲಿ ಬೀದರ್-ಬೆಂಗಳೂರು ಹಾಗೂ ಬೆಂಗಳೂರು - ಕಲಬುರಗಿ ವಿಮಾನ ಸೇವೆಗಳ ನಿರ್ವಹಣೆಗೆ ವಾರ್ಷಿಕ 28.47 ಕೋಟಿ ರು. ಮೊತ್ತದ ಅನುದಾನವನ್ನು ಒದಗಿಸಲು ಹಾಗೂ ಸದರಿ ಅನುದಾನವನ್ನು 80:20 ಅನುಪಾತದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಹಾಗೂ ಮೂಲಸೌಲಭ್ಯ ಅಭಿವೃದ್ಧಿಯಡಿ ಖರ್ಚಿಗಾಗಿ ಒದಗಿಸಲು ಸಚಿವ ಸಂಪುಟವು ಅನುಮೋದನೆ ನೀಡಿದೆ.



ಬೆಂಗಳೂರು-ಬೀದರ್-ಬೆಂಗಳೂರು ಹಾಗೂ ಬೆಂಗಳೂರು-ಕಲಬುರಗಿ-ಬೆಂಗಳೂರು ಮಾರ್ಗಗಳಲ್ಲಿ ವಿಮಾನ ಸೇವೆಗಳ ನಿರ್ವಹಣೆಗೆ ವಾರ್ಷಿಕ VGF 28.47 ಕೋಟಿ ಮೊತ್ತದ ಅನುದಾನವನ್ನು ಒದಗಿಸಲು ಅನುಮೋದನೆ, VGF ಅವಧಿಯಲ್ಲಿ ವಿಮಾನ ಹಾರಾಟ ಕಾರ್ಯಾಚರಣೆಯ ಸ್ಥಿರತೆಯನ್ನು ಸಾಧಿಸಲು ಪ್ರಯಾಣಿಕರ ಲೋಡ್ ಫ್ಯಾಕ್ಟರ್*(PLF)ಗೆ ಅನ್ವಯಪಡ ದಂತೆ VGF ಅನ್ನು ನೀಡಲು ಅನುಮೋದನೆ, ಬೆಂಗಳೂರು-ಬೀದರ್‌ಹಾಗೂ ಕಲಬುರಗಿ- ಬೆಂಗಳೂರು ಮಾರ್ಗಗಳಲ್ಲಿ ವಿಮಾನಯಾನ ಕಾರ್ಯಾಚರಣೆಯನ್ನು ಕೈಗೊಳ್ಳಲು ಆರ್ಥಿಕ ಇಲಾಖೆಯಿಂದ ವಿನಾಯಿತಿ ಪಡೆದ ನಂತರ ಕೆಎಸ್‌ಐಐಡಿಸಿ ನಿಗಮವು ಮೇ. Ghodavat Enterprises Pvt Ltd (Star Airlines) ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಳ್ಳಲು ಮೇ 5ರಂದು ಅನುಮೋದನೆ ನೀಡಲಾಗಿದೆ ಎಂದು ಸರ್ಕಾರದ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಇಂದ್ರ ಎಂ. ತಿಳಿಸಿದ್ದಾರೆ.

ಬಿಜೆಪಿ ಕೈ ಹಿಡಿದ ಬಂಗಾಳ ಮತದಾರ: ಶಾಸಕ ಡಾ.ಬೆಲ್ದಾಳೆ

ಬೀದರ್: ಪಶ್ಚಿಮ ಬಂಗಾಳದಲ್ಲಿ ಮೊದಲ ಬಾರಿಗೆ ಬಿಜೆಪಿ ಭರ್ಜರಿ ಜಯ ಬಾರಿಸಿದೆ. ಬಂಗಾಳ ಮಾತ್ರವಲ್ಲ, ದೇಶದ ಆಂತರಿಕ ಹಾಗೂ ಬಾಹ್ಯ ಸುರಕ್ಷತೆಯ ದೃಷ್ಟಿಯಿಂದ ಮತದಾರರು ಬಿಜೆಪಿ ಕೈ ಹಿಡಿದಿದ್ದಾರೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ಬೀದರ್‌ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ. ಪಂಚ ರಾಜ್ಯಗಳ ಚುನಾವಣೆ ಫಲಿತಾಂಶದಲ್ಲಿ ಮತದಾರರು ಬಿಜೆಪಿಗೆ ಭರಪೂರ ಸಾಥ್ ನೀಡಿ, ಪಕ್ಷದ ಮೇಲಿನ ವಿಶ್ವಾಸವನ್ನು ಮತ್ತಷ್ಟು ಗಟ್ಟಿಗೊಳಿಸಿದ್ದಾರೆ. 15 ವರ್ಷದಿಂದ ಬಂಗಾಳದಲ್ಲಿ ಟಿಎಂಸಿಯ ಮಮತಾ ಬ್ಯಾನರ್ಜಿ ಸಂಪೂರ್ಣ ಜಾತಿ ಆಧಾರದಲ್ಲಿ ದಬ್ಬಾಳಿಕೆ ಆಡಳಿತ ನಡೆಸುತ್ತಿದ್ದರು. ವೋಟಿನಾಸೆಗಾಗಿ ಅಕ್ರಮ ಬಾಂಗ್ಲಾ ನುಸುಳುಕೋರರಿಗೆ ರೆಡ್‌ಕಾರ್ಪೆಟ್‌ಹಾಕಿದ್ದರು. ಇಡೀ ವ್ಯವಸ್ಥೆಯೇ ಹಾಳು ಮಾಡುವ ಕೆಲಸ ಮಾಡಿದ್ದರು. ಮತದಾರರು ಇದರ ವಿರುದ್ಧ ಎಚ್ಚೆತ್ತುಕೊಂಡು ಬಿಜೆಪಿಗೆ ಗೆಲ್ಲಿಸಿ ಟಿಎಂಸಿಗೆ ಮಣ್ಣು ಮುಕ್ಕಿಸಿದ್ದಾರೆ. ಇದು ಕಾರ್ಯಕರ್ತರ ಗೆಲುವಾಗಿದೆ ಎಂದು ವ್ಯಾಖ್ಯಾನಿಸಿದ್ದಾರೆ.

ರಸ್ತೆ ಒಂದು ಪ್ರದೇಶದ ಸಾಮಾಜಿಕ ಅಭಿವೃದ್ಧಿಯ ಕೊಂಡಿ: ಡಾ. ಬೆಲ್ದಾಳೆ

ಸಿಸಿ ರಸ್ತೆಗಳ ಕಾಮಗಾರಿಗಳಿಗೆ ಶಾಸಕರಿಂದ ಚಾಲನೆ



ಬೀದರ್‌ದಕ್ಷಿಣ ಕ್ಷೇತ್ರದ ರಾಜಗೀರಾ ಗ್ರಾಮದಲ್ಲಿ ಸಿಸಿ ರಸ್ತೆ ಕಾಮಗಾರಿಗಳಿಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಚಾಲನೆ ನೀಡಿದರು.

ಬೀದರ್: ರಸ್ತೆ ಎನ್ನುವುದು ಕೇವಲ ಸಂಚಾರದ ಮಾರ್ಗವಲ್ಲ, ಅದು ಒಂದು ಪ್ರದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯ ಮೂಲ ಕೊಂಡಿಯಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಬೀದರ್‌ದಕ್ಷಿಣ ಕ್ಷೇತ್ರದ ರಾಜಗೀರಾ ಗ್ರಾಮದಲ್ಲಿ ಸುಮಾರು 75 ಲಕ್ಷ ರು. ವೆಚ್ಚದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಗ್ರಾಮೀಣ ಅಭಿವೃದ್ಧಿಗೆ ಮೂಲಭೂತ ಸೌಕರ್ಯಗಳಾದ ರಸ್ತೆ ವ್ಯವಸ್ಥೆ ಅತ್ಯಂತ ಪ್ರಮುಖವಾಗಿದ್ದು, ಈ ಕಾಮಗಾರಿಯಿಂದ ಸ್ಥಳೀಯರಿಗೆ ಸಂಚಾರ ಸುಲಭವಾಗಲಿದೆ ಎಂದು ತಿಳಿಸಿದರು.

ಬೀದರ್‌ದಕ್ಷಿಣ ಕ್ಷೇತ್ರ ಅಭಿವೃದ್ಧಿ ಪಥದಲ್ಲಿ ಮುಂದುವರೆಯುತಿದ್ದು, ರಸ್ತೆ ಮೂಲ ಸೌಕರ್ಯಕ್ಕೆ ಮತ್ತೊಂದು ಮಹತ್ವದ ಹೆಜ್ಜೆ ಇಡಲಾಗಿದೆ. ವಿವಿಧ ಗ್ರಾಮಗಳಲ್ಲಿ ಲಕ್ಷಾಂತರ ರುಪಾಯಿ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಹಂತಹಂತವಾಗಿ ಚಾಲನೆ ನೀಡಲಾಗುತ್ತಿದೆ ಎಂದರು.

ಉತ್ತಮ ರಸ್ತೆಯಿಂದ ಜನರ ಜೀವನಮಟ್ಟ ಏರಿಕೆಯಾಗುತ್ತದೆ. ಕಾಮಗಾರಿ ನಿಗದಿತ ಅವಧಿಯಲ್ಲಿ ಹಾಗೂ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿ, ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕಾರ್ಯಗಳನ್ನು ಮುಂದುವರಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸುರೇಶ ಮಾಶೆಟ್ಟಿ, ವಿಜಯಕುಮಾರ ಪಾಟೀಲ ಗಾದಗಿ, ಸೂರ್ಯಕಾಂತ ಪಾಟೀಲ, ಹಣಮಂತರಾವ ಪಾಟೀಲ, ಡಾ.ವಿರೇಂದ್ರ ಪಾಟೀಲ, ಶಾಮರಾವ ಕುಲಕರ್ಣಿ, ಶಿವರಾಜ ಸ್ವಾಮಿ, ಗುರುನಾಥ ರಾಜಗೀರಾ, ಮಲ್ಲಿಕಾರ್ಜುನ ಪಾಟೀಲ, ಪರಮೇಶ ಪಾಟೀಲ, ಶಿವು ಪಾಟೀಲ, ಶೇಖರ ಕೋಳಾರ, ಸುಧಾಕಾರ ವರ್ಮಾ ಮತ್ತಿತರರು ಇದ್ದರು.

ವಿದ್ಯಾರ್ಥಿಗಳಿಗೆ ಶ್ಲಾಘನೆ | ಮಕ್ಕಳಿಗೆ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಕಿವಿಮಾತು | ರಂಜೋಳ ಖೇಣಿಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಅಭಿನಂದನೆ

ವಿದ್ಯಾರ್ಥಿಗಳು ಸ್ಪಷ್ಟ ಗುರಿಯೊಂದಿಗೆ ಸಾಗಿದರೆ ಸಾಧನೆ ಸಾಧ್ಯ

• **ಕನ್ನಡಪ್ರಭ ವಾರ್ತೆ** ಬೀದರ್

ತಾಲೂಕಿನ ರಂಜೋಳ ಖೇಣಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ಹಾಗೂ ಶಾಲಾ ಉದ್ಯಾನವನದ ಉದ್ಘಾಟನಾ ಕಾರ್ಯಕ್ರಮ ಆಯೋಜಿಸಲಾಯಿತು.

ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಉದ್ಘಾಟಿಸಿ ಮಾತನಾಡಿ, ಶಾಲೆಯೊಳಗೆ ಪ್ರವೇಶಿಸಿದಾಗ ಉದ್ಯಾನವನದಂತೆ ಭಾಸವಾಗುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಹಳೆಯ ಗೋಡೆಗಳಿಗೆ ಹೊಸ ಜೀವ ತುಂಬಿದ ಚಿತ್ರಕಲಾ ಶಿಕ್ಷಕ ವಿಷ್ಣುಕಾಂತ ಠಾಕೂರ್ ಅವರ ಕಾರ್ಯ ಶ್ಲಾಘಿಸಿದರು. ಶಾಲೆಯ ಸುಂದರ ವಾತಾವರಣ ನಿರ್ಮಾಣಕ್ಕೆ ಶ್ರಮಿಸಿದ ಮುಖ್ಯಗುರು ಮಂಜುನಾಥ ಎನ್.ಆರ್. ಅವರ ಸೇವೆ ಪ್ರಶಂಸಿಸಿದರು.



ಬೀದರ್‌ದಕ್ಷಿಣ ಕ್ಷೇತ್ರದ ರಂಜೋಳ ಖೇಣಿ ಗ್ರಾಮದಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ಜರುಗಿತು.

ವಿದ್ಯಾರ್ಥಿಗಳು ಕಠಿಣ ಪರಿಶ್ರಮ, ಶಿಸ್ತು ಹಾಗೂ ಸ್ಪಷ್ಟ ಗುರಿಯೊಂದಿಗೆ ಮುಂದುವರೆದರೆ ಉನ್ನತ ಸಾಧನೆ ಸಾಧ್ಯ ಎಂದ ಅವರು, ಭವಿಷ್ಯದ ಗುರಿಗಳನ್ನು ನಿಗದಿಪಡಿಸಿಕೊಂಡು ನಿರಂತರವಾಗಿ ಶ್ರಮಿಸಬೇಕೆಂದು ಸಲಹೆ ನೀಡಿ ಶಾಲೆಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ವಿದ್ಯಾರ್ಥಿಗಳ ಸಾಧನೆಗೆ ಶಿಕ್ಷಕರ ಪರಿಶ್ರಮ ಹಾಗೂ ಪಾಲಕರ ಬೆಂಬಲ ಪ್ರಮುಖ ಕಾರಣವೆಂದರು. ಶಾಲೆಯ ಸುಂದರೀಕರಣ ಮತ್ತು ಉದ್ಯಾನವನ ನಿರ್ಮಾಣಕ್ಕೆ ಸಹಕರಿಸಿದ ದಾನಿಗಳು, ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರನ್ನು ಗೌರವಿಸಲಾಯಿತು.

ಮುಖ್ಯಗುರು ಮಂಜುನಾಥ ಎನ್.ಆರ್. ಮಾತನಾಡಿ, ಶಾಲೆಯ ಸಾಧನೆಗೆ ಶಿಕ್ಷಕರ ಸಮರ್ಪಿತ ಸೇವೆ ಹಾಗೂ ಪಾಲಕರ ಸಹಕಾರ ಕಾರಣವಾಗಿದ್ದು, ಮುಂದಿನ ವರ್ಷಗಳಲ್ಲಿ ಇನ್ನಷ್ಟು ಉತ್ತಮ ಫಲಿತಾಂಶ ತರುವ ದಿಟ್ಟ ನಿಲುವು ನಮ್ಮದಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮದರ್‌ಖಾನ್ ಮಾತನಾಡಿ, ಶಿಕ್ಷಕರ ಕೊರತೆಯ ನಡುವೆಯೂ ಶಾಲೆ ಅತ್ಯುತ್ತಮ ಫಲಿತಾಂಶ ಸಾಧಿಸಿರುವುದನ್ನು ಶ್ಲಾಘಿಸಿ, ಮುಂದೆಯೂ ಇದೇ ರೀತಿಯ ಶ್ರಮ ಮುಂದುವರಿಸಲು ಸೂಚಿಸಿದರು.

ಪಿಎಂಪೋಷಣ್ ಅಭಿಯಾನದ ಸಹಾಯಕ ನಿರ್ದೇಶಕ ಝಾಕೀರ್‌ಹುಸೇನ್, ಡಯಟ್ ಉಪನ್ಯಾಸಕರಾದ ಸಂತೋಷ್ ಪೂಜಾರಿ, ಗೀತಾ ಗಡ್ಡಿ, ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು, ಶಿಕ್ಷಕರು, ಪಾಲಕರು, ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು. ವಿಷ್ಣುಕಾಂತ ಠಾಕೂರ್ ಸ್ವಾಗತಿಸಿದರು. ಸತ್ಯನಾರಾಯಣ ಹಾಗೂ ರೇಖಾ ನಿರೂಪಿಸಿದರೆ, ಸಚಿನ್ ವಂದಿಸಿದರು.